## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : 2018–19ನೇ ಸಾಲಿಗೆ ಸಂಬಂಧಿಸಿದಂತೆ ನವ ರಾಷ್ಟ್ರೀಯ ಜೈವಾನಿಲ ಮತ್ತು ಸಾವಯವ ಗೊಬ್ಬರ ನಿರ್ವಹಣೆ ಕಾರ್ಯಕ್ರಮದಡಿ ಕೇಂದ್ರ ಹಾಗೂ ರಾಜ್ಯ ಸಹಾಯಧನ ವರ್ಗಾಯಿಸುವ ಕುರಿತು.

ಓದಲಾಗಿದೆ :
1. ಕೇಂದ್ರ ಸರ್ಕಾರದ ಪತ್ರ ಸಂಖ್ಯೆ 553/16/2017–ಬಯೋಗ್ಯಾಸ್, ದಿನಾಂಕ 30.05.2018.
2. ಸರ್ಕಾರದ ಪತ್ರ ಸಂಖ್ಯೆ ಗ್ರಾಅಪ 18 ಜೈಅಯೋ 2018, ದಿನಾಂಕ 08.06.2018.
3. ಸರ್ಕಾರದ ಪತ್ರ ಸಂಖ್ಯೆ ಗ್ರಾಅಪ 18 ಜೈಅಯೋ 2018, ದಿನಾಂಕ 13.02.2019.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಯಾದಗಿರಿ ಜಿಪಂಯಾ/ಡಿಆರ್‌ಡಿಎ/ ಜೈಇಂ/2018–19/4036, ದಿನಾಂಕ 23.02.2019.

### ಪ್ರಸ್ತಾವನೆ :

ಮೇಲೆ (1) ಮತ್ತು (2)ರಲ್ಲಿ ಓದಲಾದಂತೆ ನವ ಮತ್ತು ನವೀಕರಿಸಬಹುದಾದ ಇಂಧನ ಮೂಲಗಳ ಮಂತ್ರಾಲಯ, ನವ ದೆಹಲಿಯು **2018–19ನೇ** ಸಾಲಿಗೆ ಸಂಬಂಧಿಸಿದಂತೆ ನವ ರಾಷ್ಟ್ರೀಯ ಜೈವಾನಿಲ ಮತ್ತು ಸಾವಯವ ಗೊಬ್ಬರ ನಿರ್ವಹಣೆ(NNBOMP) ಕಾರ್ಯಕ್ರಮದಡಿ ರಾಜ್ಯಕ್ಕೆ ಹಂಚಿಕೆ ಮಾಡಿದ **8900** ಜೈವಾನಿಲ ಸ್ಥಾವರಗಳ ಭೌತಿಕ ಗುರಿಯನ್ನು ಜಿಲ್ಲಾ ಪಂಚಾಯತ್‌ಗಳಿಗೆ ಹಂಚಿಕೆ ಮಾಡಿದೆ.

ಮೇಲೆ (3)ರಲ್ಲಿ ಓದಲಾದಂತೆ 2018–19ನೇ ಸಾಲಿಗೆ ದಾವಣಗೆರೆ ಜಿಲ್ಲಾ ಪಂಚಾಯತ್‌ಗೆ ಕಾರ್ಯಕ್ರಮದಡಿ ನಿಗದಿಪಡಿಸಿದ ಒಟ್ಟಾರೆ ಭೌತಿಕ ಗುರಿ 330ರ ಪೈಕಿ 200 ಸ್ಥಾವರಗಳ ಭೌತಿಕ ಗುರಿಯನ್ನು ಹಿಂಪಡೆದು ಯಾದಗಿರಿ ಜಿಲ್ಲಾ ಪಂಚಾಯತ್‌ಗೆ ಹೆಚ್ಚುವರಿಯಾಗಿ ಹಂಚಿಕೆ ಮಾಡಿದೆ.

ಇದರನ್ವಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಯಾದಗಿರಿ ರವರು NNBOMP ಕಾರ್ಯಕ್ರಮದಡಿ ನಿಗದಿಪಡಿಸಿದ ಹೆಚ್ಚುವರಿ ಭೌತಿಕ ಗುರಿಗೆ ಅನುದಾನವನ್ನು ಬಿಡುಗಡೆ ಮಾಡುವಂತೆ ಮೇಲೆ ಓದಲಾದ (4)ರ ಪತ್ರದಲ್ಲಿ ಕೋರಿರುವ ಪ್ರಸ್ತಾವನೆಯನ್ನು ಪರಿಗಣಿಸಿ, 2018–19ಗೆ ಸಾಲಿಗೆ ಸಂಬಂಧಿಸಿದಂತೆ ಕಾರ್ಯಕ್ರಮದಡಿ ಸಾಧಿಸಿದ ಪ್ರಗತಿ ಹಾಗೂ ಬಿಡುಗಡೆ ಮಾಡಿದ ಕೇಂದ್ರ ಹಾಗೂ ರಾಜ್ಯ ಸಹಾಯಧನ ಆಧರಿಸಿ, ಬೀದರ್ ಹಾಗೂ ಶಿವಮೊಗ್ಗ ಜಿಲ್ಲಾ ಪಂಚಾಯತ್‌ಗಳಲ್ಲಿ ಉದ್ದೇಶಿತ ಯೋಜನೆಗೆ ವಿನಿಯೋಗಿಸದೇ ಬಾಕಿ ಉಳಿದ ಕೇಂದ್ರ ಹಾಗೂ ರಾಜ್ಯ ಸಹಾಯಧನ **ರೂ.52.50ಲಕ್ಷ**ಗಳನ್ನು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಯಾದಗಿರಿರವರಿಗೆ PFMS ಮೂಲಕ ವರ್ಗಾಯಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಶಿವಮೊಗ್ಗ ಮತ್ತು ಬೀದರ್‌ರವರುಗಳು ಸೂಕ್ತ ಕ್ರಮವಹಿಸಲು ಸರ್ಕಾರ ತೀರ್ಮಾನಿಸಿದೆ. ಪ್ರಯುಕ್ತ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ/60/ಜೈಅಯೋ/2018 ಬೆಂಗಳೂರು, ದಿನಾಂಕ 29.05.2019.**

ಪ್ರಸ್ತಾವನೆಯಲ್ಲಿ ವಿವರಿಸಿದಂತೆ ನವ ರಾಷ್ಟ್ರೀಯ ಜೈವಾನಿಲ ಮತ್ತು ಸಾವಯವ ಗೊಬ್ಬರ ನಿರ್ವಹಣೆ (NNBOMP) ಕಾರ್ಯಕ್ರಮದಡಿ 2018–19ನೇ ಸಾಲಿನಲ್ಲಿ ಕಾರ್ಯಕ್ರಮದಡಿ ಶಿವಮೊಗ್ಗ ಮತ್ತು ಬೀದರ್ ಜಿಲ್ಲೆಗಳಿಗೆ ಬಿಡುಗಡೆ ಮಾಡಿದ ಕೇಂದ್ರ ಹಾಗೂ ರಾಜ್ಯ ಸಹಾಯಧನ ಪೈಕಿ ಬಾಕಿ ಉಳಿದ **ರೂ.52.50**ಲಕ್ಷ(ಐವತ್ತೆರಡು ಲಕ್ಷದ ಐವತ್ತು ಸಾವಿರ ರೂಪಾಯಿಗಳು ಮಾತ್ರ)ಗಳನ್ನು ಕೆಳಕಂಡಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಯಾದಗಿರಿ ರವರಿಗೆ PFMS ಮೂಲಕ ವರ್ಗಾಯಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಶಿವಮೊಗ್ಗ ಮತ್ತು ಬೀದರ್‌ರವರುಗಳು ಸೂಕ್ತ ಕ್ರಮವಹಿಸುವಂತೆ ಆದೇಶಿಸಿದೆ.

| ಕ್ರಸಂ | ಜಿಲ್ಲಾ ಪಂಚಾಯತ್ | ವರ್ಗಾಯಿಸಲಾದ ಅನುದಾನ ( ರೂ.ಲಕ್ಷಗಳಲ್ಲಿ) |
|---|---|---|
| 1 | ಶಿವಮೊಗ್ಗ | 22.50 |
| 2 | ಬೀದರ್ | 30.00 |
| | ಒಟ್ಟು | 52.50 |

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಯಾದಗಿರಿ ರವರು ಬ್ಯಾಂಕ್ ಖಾತೆಯ ವಿವರಗಳು ಕೆಳಕಂಡಂತಿದೆ.

| Sl. No. | District | Name of the A/c holder | Name of the Bank | IFSC Code | Account No. | Amount (Rs. In Lakh) |
|---|---|---|---|---|---|---|
| 1 | Yadgir | Chief Executive Officer & Chief Account Officer | Corporation bank | CORP0001778 | 177800101000884 | 52.50 |

ಹಾಲಿ ಬಿಡುಗಡೆ ಮಾಡುತ್ತಿರುವ ಅನುದಾನವು ಮಹಾಲೇಖಪಾಲರ ಲೆಕ್ಕ ತಪಾಸಣೆಗೊಳಪಟ್ಟು ಬಿಡುಗಡೆ ಮಾಡಲಾಗುತ್ತಿದ್ದು, ಉದ್ದೇಶಿತ ಕಾರ್ಯಕ್ರಮಕ್ಕಾಗಿ ಮಾತ್ರ ವಿನಿಯೋಗಿಸತಕ್ಕದ್ದು. ಯಾವುದೇ ಕಾರಣಕ್ಕೂ ಅನುದಾನವನ್ನು ಮಾರ್ಗಪಲ್ಲಟ ಮಾಡತಕ್ಕದಲ್ಲ.

**ಪ್ರಸ್ತುತ ಬಿಡುಗಡೆ ಮಾಡುತ್ತಿರುವ ಸದರಿ ಅನುದಾನವನ್ನು ಗಾಂಧಿ ಸಾಕ್ಷಿ ಕಾಯಕದಡಿ ಇಂಧೀಕರಿಸುವುದು ಹಾಗೂ PFMS ತಂತ್ರಾಂಶದಲ್ಲೇ ಬಿಡುಗಡೆ ಮಾಡಲು ಕ್ರಮವಹಿಸತಕ್ಕದ್ದು.** ಹಾಲಿ ಬಿಡುಗಡೆ ಮಾಡುತ್ತಿರುವ ಅನುದಾನವನ್ನು ಲೆಕ್ಕ ಶೀರ್ಷಿಕೆ 2810-60-196-6-01ರಡಿ ವೆಚ್ಚ ಭರಿಸಿ, ನಿಗದಿತ ನಮೂನೆಯಲ್ಲಿ ಹಣಬಳಕೆ ಪ್ರಮಾಣ ಪತ್ರವನ್ನು ಸರ್ಕಾರಕ್ಕೆ ನೀಡುವುದು.

ಹಾಲಿ ಬಿಡುಗಡೆ ಮಾಡುತ್ತಿರುವ ಅನುದಾನವನ್ನು ವರ್ಗಾಯಿಸಲು ಹಾಗೂ ಪಡೆಯಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಶಿವಮೊಗ್ಗ, ಬೀದರ್ ಮತ್ತು ಯಾದಗಿರಿರವರು ಸೂಕ್ತ ಕ್ರಮ ವಹಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಡಾ: ಎನ್ ಕೃಷ್ಣಪ್ಪ ಕೋಡಿಪಾಳ್ಯ)
ನಿರ್ದೇಶಕರು (ಗ್ರಾಮೂಸೌ-2) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ,

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಶಿವಮೊಗ್ಗ, ಬೀದರ್ ಮತ್ತು ಯಾದಗಿರಿ.
3. ವಿಶೇಷ ಅಧಿಕಾರಿಗಳು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿಯನ್ನು :

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಸರ್ಕಾರದ ಕಾರ್ಯದರ್ಶಿಗಳು(ಪಂ.ರಾ) ರವರ ಆಪ್ತ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
2. ಅಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
3. ರಕ್ಷಾ ಕಡತಕ್ಕೆ / ಹೆಚ್ಚುವರಿ ಪ್ರತಿಗಳು.